## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 764. |
| ಮಾನ್ಯ ಸದಸ್ಯರ ಹೆಸರು | ಡಾ. ತಳವಾರ್ ಸಾಬಣ್ಣ |
| ಉತ್ತರಿಸುವ ದಿನಾಂಕ | 26/12/2022 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೆಳಗಾವಿಯಲ್ಲಿ ವೈದ್ಯಕೀಯ ಶಿಕ್ಷಣ ಸಂಸ್ಥೆಗೆ ವೈದ್ಯಕೀಯ ಬೋಧನಾ ಆಸ್ಪತ್ರೆ ಸ್ಥಾಪಿಸಲು ವಿಳಂಬವಾಗಲು ಕಾರಣವೇನು;</td><td>ಪ್ರಸ್ತುತ ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ವೈದ್ಯಕೀಯ ಬೋಧನಾ ಆಸ್ಪತ್ರೆಯಾಗಿ 1160 ಹಾಸಿಗೆ ಸಾಮರ್ಥ್ಯದ ಜಿಲ್ಲಾ ಆಸ್ಪತ್ರೆಯು ಕಾರ್ಯ ನಿರ್ವಹಿಸುತ್ತಿದೆ. ಪ್ರಸ್ತುತದಲ್ಲಿ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆಯನ್ನು ನಿರ್ಮಿಸುವುದಕ್ಕೆ ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ.</td></tr>
<tr><td>ಆ)</td><td>ಬೆಳಗಾವಿ ಜಿಲ್ಲೆ ಸುಮಾರು ರೂ. 65 ಲಕ್ಷ ಜನ ಸಂಖ್ಯೆ ಹೊಂದಿದ ರಾಜ್ಯದ ಅತಿ ದೊಡ್ಡ ಜಿಲ್ಲೆಯಾಗಿದ್ದು, 1859 ನೇ ಇಸವಿಯಲ್ಲಿ ಬ್ರಿಟಿಷರು ಸ್ಥಾಪಿಸಿದ ಮತ್ತು ನಂತರದ ದಿನಗಳಲ್ಲಿ ವಿಸ್ತರಿಸಿದ ಹಳೆಯ ಜಿಲ್ಲಾ ಆಸ್ಪತ್ರೆ ಅವಲಂಬಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ</td></tr>
<tr><td>ಇ)</td><td>ಬೆಳಗಾವಿ ವೈದ್ಯಕೀಯ ಶಿಕ್ಷಣ ಸಂಸ್ಥೆಯೊಂದಿಗೆ ಸ್ಥಾಪಿಸಲಾದ ಬೀದರ್, ರಾಯಚೂರು, ಮಂಡ್ಯ, ಹಾಸನ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಹೊಸದಾಗಿ ವೈದ್ಯಕೀಯ ಬೋಧನಾ ಆಸ್ಪತ್ರೆಗಳನ್ನು ನಿರ್ಮಾಣ ಮಾಡಲಾಗಿದ್ದು ಬೆಳಗಾವಿ ಜಿಲ್ಲೆಯಲ್ಲಿ ಪ್ರಾರಂಭಿಸದೇ ಮಲತಾಯಿ ಧೋರಣೆ ತಾಳಿದೆಯೇ;</td><td rowspan="2">ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆಯನ್ನು ನಿರ್ಮಿಸುವುದಕ್ಕೆ ಸಂಬಂದಿಸಿದಂತೆ ಸಹಾಯಕ ಕಾರ್ಯಕಾರಿ ಇಂಜಿನಿಯರ್, ಆಕುಕ ಇಂಜಿನಿಯರಿಂಗ್ ವಿಭಾಗ, ಬೆಳಗಾವಿ ಇವರು ಅಂದಾಜು ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿದೆ.</td></tr>
<tr><td>ಈ)</td><td>ಬೆಳಗಾವಿ ನಗರದ ಮಧ್ಯೆ ವೈದ್ಯಕೀಯ ಶಿಕ್ಷಣ ಸಂಸ್ಥೆ ಪಕ್ಕದಲ್ಲಿ ಸಾಕಷ್ಟು ಸ್ಥಳವಿದ್ದು, 500 ಬೆಡ್‌ಗಳನ್ನು ಹೊಂದಿದ ಹೊಸ ವೈದ್ಯಕೀಯ ಬೋಧನಾ ಆಸ್ಪತ್ರೆಯನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?</td></tr>
</table>

ಸಂಖ್ಯೆ: ಎಂಇಡಿ 684 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು